23

ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT: ಕೋವಿಡ್-19

ಪತ್ರಿಕೆಯ ಹೆಸರು : NAME OF THE NEWS PAPER: ಸಂಯುಕ್ತ ಕರ್ನಾಟಕ ದಿನಾಂಕ : DATE 3/6/20

# ಸೋಂಕು ನಿಯಂತ್ರಣಕ್ಕೆ ತಾಕೀತು

3/6/20

**ಸಂ.ಕ. ಸಮಾಚಾರ ಬೆಂಗಳೂರು,**

ಕೊರೊನಾ ಸೋಂಕು ನಿಯಂತ್ರಿಸುವ ಸಂಬಂಧ ಜಿಲ್ಲಾಧಿಕಾರಿಗಳು, ಪೊಲೀಸ್ ವರಿಷ್ಠಾಧಿಕಾರಿಗಳು, ಜಿಪಂ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು ಜಿಲ್ಲಾ ಕೇಂದ್ರಗಳಲ್ಲಿ ಕುಳಿತುಕೊಳ್ಳುವುದನ್ನು ಬಿಟ್ಟು ತಾಲೂಕುಗಳಲ್ಲಿ ವಾಸವಿದ್ದು ಕೊರೊನಾ ಸೋಂಕು ನಿಯಂತ್ರಣಕ್ಕೆ ತರಲು ಶ್ರಮವಹಿಸಬೇಕು ಎಂದು ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಕಟ್ಟುನಿಟ್ಟಿನ ಆದೇಶ ನೀಡಿದ್ದಾರೆ. ಕೊರೊನಾ ನಿಯಂತ್ರಣಕ್ಕೆ ಸಂಬಂಧಿಸಿದಂತೆ ಕಲಬುರಗಿ, ಯಾದಗಿರಿ, ರಾಯಚೂರು, ವಿಜಯಪುರ, ಉಡುಪಿ, ಬೆಳಗಾವಿ ಜಿಲ್ಲೆಗಳ ಜಿಲ್ಲಾಧಿಕಾರಿ, ಪೊಲೀಸ್‌ವರಿಷ್ಠಾಧಿಕಾರಿ, ಜಿಪಂ ಕಾರ್ಯನಿರ್ವಾಹಣಾಧಿಕಾರಿಗಳ ಜತೆ ವಿಡಿಯೋ ಸಂವಾದ ನಡೆಸಿ ಸೂಚನೆಗಳನ್ನು ನೀಡಿದರು.

ಕೇವಲ ಜಿಲ್ಲೆಗಳಲ್ಲಿ ಕುಳಿತುಕೊಂಡು ಆದೇಶ ನೀಡುವುದಲ್ಲ. ತಾಲೂಕು ಕೇಂದ್ರಗಳಲ್ಲಿಯೇ ವಾಸವಿದ್ದು ಎಲ್ಲವನ್ನೂ ಮೇಲ್ವಿಚಾರಣೆ ಮಾಡಬೇಕು. ಜೂನ್ 18 ರಿಂದ ನಿರ್ಬಂಧಗಳನ್ನು ಸಡಿಲಗೊಳಿಸುವುದರಿಂದ ಎಚ್ಚರಿಕೆ ಅನಿವಾರ್ಯ. .ಕೇಂದ್ರ ಸರ್ಕಾರದ ಮಾರ್ಗಸೂಚಿನಗಳು ಪಾಲನೆಯಾಗುವಂತೆ ನೋಡಿಕೊಳ್ಳಬೇಕು.

ಹೋಮ್ ಕ್ವಾರಂಟೈನ್‌ನಲ್ಲಿರುವವರು ಎಚ್ಚರಿಕೆ ವಹಿಸುವಂತೆ ಜಿಲ್ಲಾಧಿಕಾರಿಗಳು ಸೂಚನೆ ನೀಡಬೇಕು. ಅಲ್ಲದೇ ಗೃಹಬಂಧನದಲ್ಲಿರುವವರ ಮನೆಯ ಬಳಿಗೆ ಪೇದೆಗಳನ್ನು ನಿಯೋಜಿಸಬೇಕು.

ಕ್ವಾರಂಟೈನ್‌ನಲ್ಲಿದ್ದವರು ತಕರಾರು ಮಾಡುತ್ತಾರೆ ಎನ್ನುವ ದೂರು ಎಲ್ಲೆಡೆ ಕೇಳಿಬರುತ್ತಿದೆ. ಪ್ರತಿ ನಗರ ಹಾಗೂ ಗ್ರಾಮಗಳ ವಾರ್ಡ್‌ಮಟ್ಟದಲ್ಲಿ ಕಾವಲು ಸಮಿತಿ ರಚಿಸಬೇಕು. ಈ ಸಂದರ್ಭದಲ್ಲಿ ಹೋಮ್ ಕ್ವಾರಂಟೈನ್ ಉಲ್ಲಂಘನೆಯಾದರೆ ಅಂಥವರ ಮೇಲೆ ಎಫ್‌ಐಆರ್ ದಾಖಲಿಸಬೇಕು ಎಂದು ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.



ತಮ್ಮ ಗೃಹಕಚೇರಿ ಕೃಷ್ಣಾದಲ್ಲಿ ಮಂಗಳವಾರ ನಡೆಸಿದ ಜಿಲ್ಲಾಧಿಕಾರಿಗಳು, ಪೊಲೀಸ್ ವರಿಷ್ಠಾಧಿಕಾರಿಗಳು, ಜಿಪಂ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳ ವಿಡಿಯೋ ಸಂವಾದದಲ್ಲಿ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ, ಗೃಹಸಚಿವ ಬಸವರಾಜ ಬೊಮ್ಮಾಯಿ, ಸರ್ಕಾರದ ಮುಖ್ಯ ಕಾರ್ಯದರ್ಶಿ ವಿಜಯಭಾಸ್ಕರ್ ಮುಂತಾದವರು ಪಾಲ್ಗೊಂಡಿದ್ದರು.

ಬೇರೆ ರಾಜ್ಯಗಳಿಂದ ವಲಸಿಗ ಕಾರ್ಮಿಕರು ಬರುವುದರಿಂದ ಗ್ರಾಮಗಳಲ್ಲಿ ಎಚ್ಚರಿಕೆವಹಿಸಬೇಕು. ಗ್ರಾಮ ಪಂಚಾಯತಿಗಳಲ್ಲಿ ಟಾಸ್ಕ್‌ಫೋರ್ಸ್ ರಚಿಸಿ ಸಂಪೂರ್ಣ ನಿಗಾವಹಿಸಬೇಕು. ಈ ಬಗ್ಗೆ ಗ್ರಾಪಂ ಸದಸ್ಯರಿಗೆ ಈಗಾಗಲೇ ತರಬೇತಿಯನ್ನೂ ನೀಡಲಾಗಿದ್ದು, ಬೂತ್ ಮಟ್ಟದ ತಂಡಗಳೂ ಪ್ರತಿ ದಿನ ವರದಿ ಸಲ್ಲಿಸುವಂತೆ ಕ್ರಮ ಕೈಗೊಳ್ಳುವಂತೆ ಸೂಚಿಸಿದರು.

ಗಡಿ ಭಾಗಗಳಿರುವ ಜಿಲ್ಲೆಗಳು ಕಟ್ಟುನಿಟ್ಟಾಗಿ ಗಡಿ ಪ್ರದೇಶಗಳನ್ನು ಕಾಯ್ದು, ಅಕ್ರಮ ಪ್ರವೇಶವನ್ನು ತಡೆಯಬೇಕು.

ಮೃತ ದೇಹಗಳನ್ನು ಯಾವುದೇ ಕಾರಣಕ್ಕೂ ರಾಜ್ಯದೊಳಗೆ ತರದಂತೆ ನೋಡಿಕೊಳ್ಳಬೇಕೆಂದು ನಿರ್ದೇಶಿಸಿದರು ಎಸ್‌ಎಸ್‌ಎಲ್‌ಸಿ, ಪಿ.ಯು.ಸಿ ಪರೀಕ್ಷಾ ದಿನಾಂಕಗಳು ನಿಗದಿಯಾಗಿದ್ದು, ಪರೀಕ್ಷೆಗಳು ಸುಗಮವಾಗಿ ನಡೆಯುವಂತೆ ಕ್ರಮ ವಹಿಸುವಂತೆ ಮುಖ್ಯಮಂತ್ರಿಗಳು ಸೂಚಿಸಿದರು.

ಗೃಹ ಸಚಿವ ಬಸವರಾಜ ಬೊಮ್ಮಾಯಿ, ಕಂದಾಯ ಸಚಿವ ಆರ್.ಅಶೋಕ್, ಮುಖ್ಯ ಕಾರ್ಯದರ್ಶಿ ಟಿ.ಎಂ.ವಿಜಯಭಾಸ್ಕರ್, ಅಭಿವೃದ್ಧಿ ಆಯುಕ್ತೆ ವಂದಿತಾ ಶರ್ಮಾ, ಪೊಲೀಸ್ ಮಹಾ ನಿರ್ದೇಶಕ ಪ್ರವೀಣ್ ಸೂದ್, ಆರೋಗ್ಯ ಇಲಾಖೆಯ ಪ್ರಧಾನ ಕಾರ್ಯದರ್ಶಿ ಜಾವೇದ ಅಖ್ತರ್ ಹಾಗೂ ಕಾರ್ಯದರ್ಶಿ ಪಂಕಜ್ ಕುಮಾರ್ ಪಾಂಡೆ ಮುಂತಾದವರು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.